ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು

3580 (3496) ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳೆಷ್ಟು;

ಆ) ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಿತ್ತಿರುವ ಉಪನ್ಯಾಸಕರು ಹಾಗೂ ಉಪನ್ಯಾಸಕೇತರ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು;

ಇ) ಈ ವಿಶ್ವವಿದ್ಯಾಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) ಹತ್ತು

ಆ) ಉಪನ್ಯಾಸಕರು 2126
ಉಪನ್ಯಾಸಕೇತರ 5037

ಇ) 620

ತರೀಕೆರೆ ತಾಲ್ಲೂಕಿನಲ್ಲಿ ರಾಜೀವ್‌ಗಾಂಧಿ ಕುಡಿಯುವ ನೀರಿನ ಯೋಜನೆ

3581 (3497) ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕಿನಲ್ಲಿ ತರೀಕೆರೆ ವ್ಯಾಪ್ತಿಯಲ್ಲಿ ಸುಮಾರು 60 ಗ್ರಾಮಗಳಿಗೆ ರಾಜೀವ್‌ಗಾಂಧಿ ಕುಡಿಯುವ ನೀರಿನ ಯೋಜನೆಯಲ್ಲಿ ಜಿಲ್ಲಾ ಪಂಚಾಯ್ತಿಯಿಂದ ಅಂದಾಜು ನಕ್ಷೆ ಆಗಿದೆಯೇ;

ಆ) ಹಾಗಿದ್ದಲ್ಲಿ, ಅವು ಯಾವ ಹಂತದಲ್ಲಿವೆ; ಈ ಯೋಜನೆಗೆ ತಗಲುವ ಹಣವೆಷ್ಟು; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು):

ಅ) ಹೌದು. ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕಿನಲ್ಲಿ ಕುಡಿಯುವ ನೀರಿನಲ್ಲಿ ಗುಣಮಟ್ಟ ಸಮಸ್ಯೆ ಇರುವಂತಹ 62 ಗ್ರಾಮೀಣ ಜನವಸತಿಗಳಿಗೆ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಗಾಗಿ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ.

ಆ) ಯೋಜನೆಯ ಅಂದಾಜು ಮೊತ್ತ ರೂ. 26.47 ಕೋಟಿ ಇದ್ದು, ಯೋಜನೆಯ ಅಂದಾಜು ಪಟ್ಟಿ ಆಡಳಿತಾತ್ಮಕವಾಗಿ ಮಂಜೂರಾಗಿರುವುದಿಲ್ಲ. ಅನುದಾನ ಲಭ್ಯತೆಗನುಗುಣವಾಗಿ ಯೋಜನೆಯು ಆಡಳಿತಾತ್ಮಕವಾಗಿ ಮಂಜೂರಾದ ನಂತರ ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ.

ಬಿಜಾಪುರ ಜಿಲ್ಲೆಯಲ್ಲಿ ಬಸವ ಸ್ಮಾರಕ ನಿರ್ಮಿಸುವುದು

3582 (4099) ಶ್ರೀ ಪಾಟೀಲ ಶಿವಾನಂದ ಸಿದ್ದರಾಮಗೌಡ (ತಿಕೋಟ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಣ್ಣನವರ ಸ್ಮಾರಕವನ್ನು ನಿರ್ಮಿಸಲು ಬಿಜಾಪುರ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆಯೇ;

ಆ) ಹಾಗಿದ್ದರೆ, ಯಾವ ನಿರ್ದಿಷ್ಟ ಕಾಲಾವಧಿಯಲ್ಲಿ ನಿರ್ಮಿಸಲಾಗುವುದು;

ಇ) ಇದುವರೆಗೂ ನಿರ್ಮಾಣ ಕೆಲಸಕ್ಕಾಗಿ ಜಿಲ್ಲಾಧಿಕಾರಿಗಳು ಕೈಗೊಂಡ ಕ್ರಮಗಳೇನು;

ಈ) ಸ್ಮಾರಕ ನಿರ್ಮಾಣಕ್ಕಾಗಿ ಸರ್ಕಾರ ಯಾವಾಗ ಮಂಜೂರಾತಿ ನೀಡಿದೆ;

ಉ) ಇಷ್ಟೊಂದು ವಿಳಂಬಕ್ಕೆ ಕಾರಣಗಳೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ಹೌದು

ಆ) ಜಿಲ್ಲಾ ಆಡಳಿತ ಸ್ಮಾರಕ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಬೇಕಾಗಿದೆ.

ಇ) ಜಿಲ್ಲಾ ಆಡಳಿತ ಸ್ಮಾರಕ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಬೇಕಾಗಿದೆ.

ಈ) ದಿನಾಂಕ 21.3.2000ರಲ್ಲಿ ಮಂಜೂರಾತಿ ನೀಡಿದೆ.

ಉ) ಬಸವನ ಬಾಗೇವಾಡಿ ಪ್ರದೇಶವನ್ನು ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಗೆ ತರಲು ಪರಿಶೀಲನೆಯಲ್ಲಿರುವುದರಿಂದ ವಿಳಂಬವಾಗಿದೆ.

ತಿಕೋಟ ಕ್ಷೇತ್ರದಲ್ಲಿ ಪ್ರೌಢ ಶಾಲೆಗಳಿಗೆ ಹೊಸ ಕೊಠಡಿಗಳ ನಿರ್ಮಾಣ

3583 (4101) ಶ್ರೀ ಪಾಟೀಲ್ ಶಿವಾನಂದ ಸಿದ್ಧರಾಮಗೌಡ (ತಿಕೋಟ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತಿಕೋಟ ವಿಧಾನಸಭಾ ಮತಕ್ಷೇತ್ರದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಹೊಸ ಕೊಠಡಿಗಳನ್ನು ನಿರ್ಮಿಸಲು ಮತ್ತು ಪ್ರಾಥಮಿಕ ಕೊಠಡಿಗಳನ್ನು ದುರಸ್ತಿ ಗೊಳಿಸಲು ಸರ್ಕಾರ ಈ ಕ್ಷೇತ್ರದ ಶಾಸಕರ ಕೋರಿಕೆಯಂತೆ ಅನುದಾನ ಒದಗಿಸಿದೆಯೇ;

ಆ) ಹಾಗಿದ್ದರೆ, ಸರ್ಕಾರ ನೀಡಿರುವ ಅನುದಾನವೆಷ್ಟು;

ಇ) ಅನುದಾನವನ್ನು ಬಳಸಿಕೊಂಡು ಮತಕ್ಷೇತ್ರದಲ್ಲಿ ಯಾವ ಶಾಲೆಗಳ ಕೊಠಡಿಗಳನ್ನು ನಿರ್ಮಿಸಲಾಗುತ್ತಿದೆ ಮತ್ತು ದುರಸ್ತಿ ಗೊಳಿಸಲಾಗುತ್ತಿದೆ. ಅನುದಾನವನ್ನು ಯಾವ ಇಲಾಖೆಗೆ ಬಿಡುಗಡೆ ಗೊಳಿಸಲಾಗಿದೆ;

ಈ) ಕಾಮಗಾರಿಗಳು ಯಾವ ಹಂತದಲ್ಲಿದೆ; ಈ ಕೆಲಸವನ್ನು ಯಾವ ಇಲಾಖೆಯಿಂದ ನಿರ್ವಹಿಸಲಾಗುತ್ತಿದೆ.

ಉ) ಬಿಜಾಪುರ ಜಿಲ್ಲಾ ಪಂಚಾಯತ್‌ನಿಂದ ಕಾಮಗಾರಿಗಳನ್ನು ಸ್ಥಗಿತಗೊಳಿಸುವಂತೆ ಸರ್ಕಾರಕ್ಕೆ ಪತ್ರ ಬರೆದು ತಿಳಿಸಲಾಗಿದ್ದು ನಿಜವೇ;

ಊ) ಸರ್ಕಾರ ಕೈಗೊಂಡ ಕ್ರಮಗಳೇನು; ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲಾಗುತ್ತದೆ?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಮತ್ತು ಆ) ಹೌದು ಒದಗಿಸಿದೆ.

ಪ್ರಾಥಮಿಕ ಶಾಲಾ ಕೊಠಡಿ ನಿರ್ಮಾಣಕ್ಕೆ	ರೂ. 13.15 ಲಕ್ಷ
ಪ್ರೌಢಶಾಲೆಗಳಿಗೆ ಹೊಸ ಕೊಠಡಿ ನಿರ್ಮಾಣಕ್ಕೆ	ರೂ. 17.50 ಲಕ್ಷ